**National**
**Kannada**
**29.05.2026 19.35 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಜನಸಂಖ್ಯಾ ಸಂರಚನೆ ರಕ್ಷಣೆಗೆ ಅಕ್ರಮ ವಲಸೆ ನಿವಾರಣೆ ಅತ್ಯಗತ್ಯ- ಕೇಂದ್ರ ಗೃಹ ಸಚಿವ ಅಮಿತ್ ಶಾ

೨. 'ಆತ್ಮನಿರ್ಭರ ಭಾರತ' ಪರಿಕಲ್ಪನೆ ವಿಶ್ವದ ಅಭಿವೃದ್ಧಿಗೆ ಪೂರಕ-ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅಭಿಮತ

೩. ಪ್ರಮುಖ ಅಂಶಗಳ ಬೆಂಬಲದಿಂದಾಗಿ ದೇಶದ ಆರ್ಥಿಕತೆ ಬೆಳವಣಿಗೆ ಪಥದಲ್ಲಿ- ಆರ್‌ಬಿಐ ವರದಿ

೪. ರೈತರಿಗೆ ಪೂರೈಸಲು ೧ ಲಕ್ಷದ ೭೪ ಸಾವಿರ ಕ್ವಿಂಟಲ್ ಬಿತ್ತನೆ ಬೀಜ ದಾಸ್ತಾನು ಸಂಗ್ರಹ - ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್

೫. ಮ್ಯಾನ್ಮಾರ್ ಅಧ್ಯಕ್ಷ ಐದು ದಿನಗಳ ಭಾರತ ಭೇಟಿಗಾಗಿ ನಾಳೆ ಆಗಮನ

೬. ಐಪಿಎಲ್ ಟಿ-೨೦ ಕ್ರಿಕೆಟ್: ಎರಡನೇ ಅರ್ಹತಾ ಪಂದ್ಯದಲ್ಲಿ ಗುಜರಾತ್ ಟೈಟನ್ಸ್ ವಿರುದ್ಧ ಟಾಸ್ ಗೆದ್ದ ರಾಜಸ್ತಾನ್ ರಾಯಲ್ಸ್, ಬ್ಯಾಟಿಂಗ್ ಆಯ್ಕೆ

**<><><*><><<>**

ದೇಶದ ಜನಸಂಖ್ಯಾ ಸಂರಚನೆಯನ್ನು ರಕ್ಷಿಸಿಕೊಳ್ಳುವಲ್ಲಿ ಗಡಿ ಭದ್ರತೆ ಮತ್ತು ಅಕ್ರಮ ವಲಸೆ ನಿವಾರಿಸುವುದು ಅತಿ ಮುಖ್ಯ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಅವರು ಗುಜರಾತ್‌ನ ಬುಜ್‌ನಲ್ಲಿ ಭಾರತ- ಪಾಕಿಸ್ತಾನ ಗಡಿಉದ್ದಕ್ಕೂ ನಿರ್ಮಿಸಲಾದ ಜಿ-೭ ಮತ್ತು ಜಿ-೧೩ ಗಡಿ ಔಟ್ ಪೋಸ್ಟ್‌ಗಳನ್ನು ಇಂದು ಉದ್ಘಾಟಿಸಿದ ನಂತರ ಮಾತನಾಡುತ್ತಿದ್ದರು. ಗಡಿ ನಿರ್ವಹಣೆಯಲ್ಲಿ ಹೊಸದಾಗಿ ನಾಲ್ಕು ಹಂತದ ರಕ್ಷಣಾ ವ್ಯವಸ್ಥೆ ಜಾರಿಗೆ ತರಲಾಗಿದೆ. ನುಸುಳುವಿಕೆಗೆ ಅವಕಾಶ ಇರದ, ಸೋರಿಕೆ ರಹಿತ ಭದ್ರತಾ ಜಾಲ ರೂಪಿಸಲು ಅತ್ಯಾಧುನಿಕ ಬೇಲಿ, ಡ್ರೋಣ್ ಮತ್ತು ರಡಾರ್‌ಗಳನ್ನು ಬಳಸಲಾಗುತ್ತಿದೆ ಎಂದು ಗೃಹ ಸಚಿವರು ತಿಳಿಸಿದರು. ಅಂತಾರಾಷ್ಟ್ರೀಯ ಗಡಿ

ವಿಚಾರ ಪ್ರಸ್ತಾಪಿಸಿದ ಗೃಹ ಸಚಿವ ಅಮಿತ್ ಶಾ, ಪಶ್ಚಿಮ ಬಂಗಾಳದಲ್ಲಿ ಹೊಸ ಸರ್ಕಾರ ಅಧಿಕಾರಕ್ಕೆ ಬಂದಿರುವ ಹಿನ್ನೆಲೆಯಲ್ಲಿ ದೀರ್ಘಾವಧಿಯಿಂದ ನೆನೆಗುದಿಗೆ ಬಿದ್ದಿದ್ದ ಅಂಶಗಳು ಕೊನೆಗೊಂಡಿವೆ. ಅಲ್ಲಿನ ರಾಜ್ಯ ಸರ್ಕಾರ ಗಡಿ ಬೇಲಿ ಹಾಕಲು ಒಂದು ವಾರದೊಳಗೆ ಅಗತ್ಯವಿರುವ ಭೂಮಿಯನ್ನು ಒದಗಿಸಿದೆ ಎಂದು ಈ ಸಂದರ್ಭದಲ್ಲಿ ತಿಳಿಸಿದರು.  ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್, ಗೃಹ ಖಾತೆ ರಾಜ್ಯ ಹರ್ಷ ಸಾಂಗ್ವಿ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

<>><><*><><<>

’ಆತ್ಮನಿರ್ಭರ ಭಾರತ’ ಪರಿಕಲ್ಪನೆಯು ಇಡೀ ವಿಶ್ವದ ಅಭಿವೃದ್ಧಿಗೆ ಪೂರಕವಾಗಿದೆ ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಹೇಳಿದ್ದಾರೆ. ಕರ್ನಾಟಕದ ದಾವಣಗೆರೆಯಲ್ಲಿಂದು ಯುಬಿಡಿಟಿ ಎಂಜಿನಿಯರಿಂಗ್ ಕಾಲೇಜಿನ ಅಮೃತ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. "ಡಿಜಿಟಲ್ ಇಂಡಿಯಾ, ಮೇಕ್ ಇನ್ ಇಂಡಿಯಾ, ಸ್ಟಾರ್ಟ್ ಅಪ್ ಇಂಡಿಯಾ ಮತ್ತು ಸ್ಕಿಲ್ ಇಂಡಿಯಾದಂತಹ ಯೋಜನೆಗಳ ಮೂಲಕ ದೇಶದ ಯುವಶಕ್ತಿಗೆ ವ್ಯಾಪಕ ಅವಕಾಶಗಳನ್ನು ಕಲ್ಪಿಸಲಾಗಿದ್ದು, ಭವಿಷ್ಯದಲ್ಲಿ ಭಾರತವು ಜಾಗತಿಕ ಮಟ್ಟದಲ್ಲಿ ಮುನ್ನಡೆ ಸಾಧಿಸಲಿದೆ ಎಂದರು. ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ, ನೈತಿಕ ನಾಯಕತ್ವ ಗುಣ ಹೊಂದಿದ ದೇಶದ ನಿರ್ಮಾತೃಗಳನ್ನು ರೂಪಿಸುವ ಗುರುತರ ಜವಾಬ್ದಾರಿ ಎಂಜಿನಿಯರಿಂಗ್ ಸಂಸ್ಥೆಗಳ ಮೇಲಿದೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದರು. ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್,  ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ನಿರ್ಮಲಾನಂದ ನಾಥ ಮಹಾಸ್ವಾಮೀಜಿ, ಸಂಸದರು ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

<>><><*><><<>

ಪ್ರಸ್ತುತ ಹಣಕಾಸು ವರ್ಷದಲ್ಲಿ ಇಂಧನ ಬೆಲೆ ಏರಿಕೆ ನಡುವೆಯು, ಪ್ರಮುಖ ಅಂಶಗಳ ಬೆಂಬಲದಿಂದಾಗಿ ದೇಶದ ಆರ್ಥಿಕತೆ ಬೆಳವಣಿಗೆ ಪಥದಲ್ಲಿ ಸಾಗಲಿದೆ ಎಂದು ಭಾರತೀಯ ರಿಸರ್ವ್ ಬ್ಯಾಂಕ್- ಆರ್‌ಬಿಐ ನ ವಾರ್ಷಿಕ ವರದಿಯಲ್ಲಿ ತಿಳಿಸಲಾಗಿದೆ. ಮಾರ್ಚ್ ೨೦೨೬ರಕ್ಕೆ ಮುಕ್ತಾಯಗೊಂಡ ಅವಧಿಯಲ್ಲಿ ಆರ್‌ಬಿಐ ನ ತಪಶೀಲು ಪತ್ರ ಶೇಕಡಾ ೨೦.೬ ರಷ್ಟು ಹೆಚ್ಚಳ ದಾಖಲಿಸಿದೆ. ದೇಶೀಯ ಬಂಡವಾಳ ಹೂಡಿಕೆ ಚಿನ್ನ ಮತ್ತು ವಿದೇಶಿ ಬಂಡವಾಳ ಹೂಡಿಕೆಗಳಲ್ಲಿ ಉಂಟಾದ ಏರಿಕೆಯಿಂದಾಗಿ ಸ್ವತ್ತು ಪ್ರಮಾಣ ಹೆಚ್ಚಳ ಕಂಡಿದೆ. ಖಾತೆಗಳ ಮರು ಮೌಲ್ಯಮಾಪನ, ನೋಟುಗಳ ವಿತರಣೆ, ಠೇವಣಿ ಹಾಗೂ ಇತರ ಅಂಶಗಳಿಂದ ಹೊಣೆಗಾರಿಕೆ ವಿಭಾಗ ಹೆಚ್ಚಳ

ದಾಖಲಿಸಿದೆ. ಕಳೆದ ವರ್ಷದ ಮಾರ್ಚ್ ೩೧ ಕ್ಕೆ ೮೭೯.೫೮ ಮೆಟ್ರಿಕ್ ಟನ್‌ಗಳಷ್ಟಿದ್ದ ಚಿನ್ನ ಸಂಗ್ರಹ ಪ್ರಸ್ತುತ ೮೮೦.೫೨ ಮೆಟ್ರಿಕ್ ಟನ್ ಗಳಿಷ್ಟಿದೆ ಎಂದು ವರದಿಯಲ್ಲಿ ತಿಳಿಸಲಾಗಿದೆ.

<>><><*><><<>

ಆಪರೇಷನ್ ಸಿಂಧೂರ್ ಕಾರ್ಯಾಚರಣೆ ಅಪ್ರತಿಮ ಯಶೋಗಾಥೆಯಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಆಪರೇಷನ್ ಸಿಂಧೂರ್ ಕುರಿತಾದ ಸ್ಮರಣ ಸಂಚಿಕೆಯನ್ನು ಬಿಡುಗಡೆಗೊಳಿಸಿರುವ ಸಚಿವರು, ಭಾರತ ಇದುವರೆಗೆ ಮಾಡಿದ ಎಲ್ಲಾ ಯುದ್ಧಗಳಿಗಿಂತ ಈ ಕಾರ್ಯಾಚರಣೆ ವಿಭಿನ್ನವಾಗಿದ್ದು, ನಾಲ್ಕು ದಿನಗಳ ಒಳಗೆ ಪಾಕಿಸ್ತಾನವನ್ನು ಕದನ ವಿರಾಮಕ್ಕಾಗಿ ಯಾಚಿಸುವಂತೆ ಮಾಡಿತು ಎಂದು ವಿವರಿಸಿದ್ದಾರೆ. ಸ್ಮರಣ ಸಂಚಿಕೆಯಲ್ಲಿ ವೀರ ಯೋಧರ ವೈಯಕ್ತಿಕ ಅನುಭವಗಳನ್ನು ಹಾಗೂ ನಾಯಕತ್ವ, ಧೈರ್ಯ ಒತ್ತಡಗಳ ನಡುವೆ ಬದ್ಧತೆಯ ಪ್ರದರ್ಶನ ಮೊದಲಾದ ಒಳನೋಟಗಳನ್ನು ಒಳಗೊಂಡಿದೆ ಎಂದು ಅವರು ತಿಳಿಸಿದ್ದಾರೆ.

<>><><*><><<>

ದೇಶದ ಎಲ್ಲಾ ತೈಲ ಶುದ್ಧೀಕರಣ ಘಟಕಗಳು ಗರಿಷ್ಠ ಮಟ್ಟದಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಪೆಟ್ರೋಲ್ ಡೀಸೆಲ್ ಮತ್ತು ದ್ರವೀಕೃತ ಪೆಟ್ರೋಲಿಯಂ ಅನಿಲ ದಾಸ್ತಾನು ಸಾಕಷ್ಟು ಇದೆ ಎಂದು ಸರ್ಕಾರ ತಿಳಿಸಿದೆ. ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ ನವದೆಹಲಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಪ್ರತಿದಿನ ೯೨ ಸಾವಿರ ಮೆಟ್ರಿಕ್ ಟನ್‌ಗಳಷ್ಟು ಎಲ್‌ಪಿಜಿ ಉತ್ಪಾದಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ. ಬಂದರು, ಹಡಗು ಮತ್ತು ಜಲಮಾರ್ಗ ಸಚಿವಾಲಯದ ನಿರ್ದೇಶಕ ಓಪೇಶ್‌ಕುಮಾರ್ ಮಾತನಾಡಿ, ೨ ಲಕ್ಷ ೭೦ ಸಾವಿರ ಮೆಟ್ರಿಕ್ ಟನ್ ಕಚ್ಚಾ ತೈಲ ಹೊತ್ತು ತರುತ್ತಿರುವ ನಿಸೋಸ್ ಕೆರೊಸ್ ಎನ್ನುವ ವ್ಯಾಪಾರಿ ಹಡಗು ಹಾರ್ಮುಜ್ ಜಲಸಂಧಿಯನ್ನು ದಾಟಿದ್ದು, ಜೂನ್ ೩ ರಂದು ವಿಶಾಖಪಟ್ಟಣಂಗೆ ಆಗಮಿಸುವ ನಿರೀಕ್ಷೆಯಿದೆ ಎಂದು ಹೇಳಿದ್ದಾರೆ.

<>><><*><><<>

ದೇಶದಲ್ಲಿ ಬಿತ್ತನೆ ಬೀಜ ಲಭ್ಯತೆ ಖಾತರಿಪಡಿಸಲು ೧ ಲಕ್ಷದ ೭೪ ಸಾವಿರ ಕ್ವಿಂಟಲ್ ಬಿತ್ತನೆ ಬೀಜ ದಾಸ್ತಾನು ಇದೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ಮುಂಗಾರು ಹಂಗಾಮಿನ ರಾಷ್ಟ್ರೀಯ ಸಮಾವೇಶದ ಎರಡನೇ ದಿನದ ಸಂದರ್ಭದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದ ೯ ಲಕ್ಷದ ೭೬ ಸಾವಿರ ರೈತರ ಗುರುತಿನ ಚೀಟಿಗಳನ್ನು ರಚಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ದೇಶದಲ್ಲಿ ಆಹಾರ

ಧಾನ್ಯ ಉತ್ಪಾದನೆ ಇದುವರೆಗಿನ ಅತ್ಯಂತ ಗರಿಷ್ಠ ೩೭೬ ಮಿಲಿಯನ್ ಟನ್‌ಗಳಷ್ಟಾಗುವ ನಿರೀಕ್ಷೆಯಿದೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ.

<>><><*><><<>

ಮ್ಯಾನ್ಮಾರ್ ಅಧ್ಯಕ್ಷ ಯು ಮಿನ್ ಔಂಗ್ ಹ್ಲೈಂಗ್ ಐದು ದಿನಗಳ ಭಾರತ ಭೇಟಿಗಾಗಿ ನಾಳೆ ಆಗಮಿಸಲಿದ್ದಾರೆ. ವಿದೇಶಾಂಗ ವ್ಯವಾಹಾರಗಳ ಸಚಿವಾಲಯದ ವಕ್ತಾರ ರಣದೀರ್ ಜೈಸ್ವಾಲ್ ನವದೆಹಲಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ್ದಾರೆ. ಮ್ಯಾನ್ಮಾರ್ ಅಧ್ಯಕ್ಷರು ಈ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿ, ಉಭಯ ದೇಶಗಳ ಬಲವರ್ಧನೆ ಕುರಿತಂತೆ ವಿಚಾರ ವಿನಿಮಯ ನಡೆಸಲಿದ್ದಾರೆ. ಭಾರತ-ಚೀನಾ ಗಡಿ ಕುರಿತು ಇತ್ತೀಚೆಗೆ ನಡೆದ ಸಲಹೆ ಮತ್ತು ಸಮನ್ವಯದ ಕಾರ್ಯಕಾರಿ ವ್ಯವಸ್ಥೆ ಸಭೆ ಬಗ್ಗೆ ಪ್ರಸ್ತಾಪಿಸಿದ ಜೈಸ್ವಾಲ್ ಚರ್ಚೆಗಳು ರಚನಾತ್ಮಕವಾಗಿದ್ದು, ಉಭಯ ಪಕ್ಷಗಳು ಗಡಿ ನಿರ್ವಹಣೆ ಹಾಗೂ ಸಹಕಾರ ಕುರಿತಂತೆ ಚರ್ಚೆ ನಡೆಸಿದವು. ಭಾರತ, ಗಡಿ ನದಿ ಕುರಿತಾದ ಮುಂದಿನ ಪರಿಣತರ ಸಭೆಯನ್ನು ಆದಷ್ಟು ಬೇಗ ಆಯೋಜಿಸುವ ಬಗ್ಗೆ ಒತ್ತಾಸೆ ನೀಡಿತು ಎಂದು ವಿವರ ನೀಡಿದರು. ಭಾರತ, ಆಫ್ರಿಕಾಕ್ಕೆ ಮೊದಲ ಕಂತಿನ ವೈದ್ಯಕೀಯ ಸಾಮಗ್ರಿಗಳನ್ನು ಪೂರೈಸುತ್ತಿದ್ದು, ಉಗಾಂಡದಲ್ಲಿರುವ ಭಾರತೀಯ ಹೈಕಮಿಷನರ್ ಸಿಡಿಸಿಎ ಕಚೇರಿಗೆ ಇಂದು ಅವುಗಳನ್ನು ಹಸ್ತಾಂತರಿಸಿದ್ದಾರೆ ಎಂದು ಪ್ರಶ್ನೆಯೊಂದಕ್ಕೆ ಉತ್ತರ ನೀಡಿದರು. ಬಾಂಗ್ಲದೇಶಿ ಅಕ್ರಮ ವಲಸಿಗರ ಕುರಿತಂತೆ ಪ್ರತಿಕ್ರಿಯಿಸಿರುವ ಅವರು, ಭಾರತ, ೨ ಸಾವಿರದ ೬೮೦ ಕ್ಕೂ ಹೆಚ್ಚು ಪ್ರಕರಣಗಳನ್ನು ರಾಷ್ಟ್ರೀಯತೆಯ ಪರಿಶೀಲನೆಗಾಗಿ ಬಾಂಗ್ಲಾದೇಶಕ್ಕೆ ಹಸ್ತಾಂತರಿಸಲಾಗಿದೆ. ಪರಿಶೀಲನೆಯ ನಂತರ ಈ ವ್ಯಕ್ತಿಗಳನ್ನು ಬಾಂಗ್ಲಾದೇಶಕ್ಕೆ ಕಳುಹಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು. ಭಾರತ-ಅಮೆರಿಕ ವಾಣಿಜ್ಯ ಸಂಬಂಧ ಕುರಿತಂತೆ ಪ್ರಸ್ತಾಪಿಸಿದ ಅವರು, ಅಮೆರಿಕದ ನಿಯೋಗವೊಂದು ಮುಂದಿನ ವಾರ ಭಾರತಕ್ಕೆ ಆಗಮಿಸುವ ನಿರೀಕ್ಷೆಯಿದೆ ಎಂದು ವಿದೇಶಾಂಗ ವ್ಯವಾಹಾರಗಳ ಸಚಿವಾಲಯದ ವಕ್ತಾರ ರಣದೀರ್ ಜೈಸ್ವಾಲ್ ತಿಳಿಸಿದರು.

<>><><*><><<>

ನವದೆಹಲಿಯ ಇಂದಿರಾಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ವೈಮಾನಿಕ ಹಾರಾಟಗಳಿಗೆ ಅನುಕೂಲವಾಗುವ ಮುಂದಿನ ತಲೆಮಾರಿನ ಹವಾಮಾನ ಮತ್ತು ಮಂಜು ಮಾಹಿತಿ ವ್ಯವಸ್ಥೆ- ಸ್ಕೈಕಾಸ್ಟ್ ಅನ್ನು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವ ಡಾ.ಜಿತೇಂದ್ರ ಸಿಂಗ್ ಇಂದು ಉದ್ಘಾಟಿಸಿದರು. ಮಿಷನ್ ಮೌಸಂ ಉಪಕ್ರಮದಡಿ ಈ ಹೊಸ ವ್ಯವಸ್ಥೆ ಕಲ್ಪಿಸಲಾಗಿದೆ. ಈ

ಸಂದರ್ಭದಲ್ಲಿ ಮಾತನಾಡಿದ ಸಚಿವ ಡಾ.ಜಿತೇಂದ್ರ ಸಿಂಗ್ ಹವಾಮಾನ ಬದಲಾವಣೆಗಳ ಸಂದರ್ಭದಲ್ಲಿ ಅದರಲ್ಲೂ ವಿಶೇಷವಾಗಿ ಚಳಿಗಾಲದಲ್ಲಿ ತೀವ್ರ ಮಂಜುಕವಿದ ವಾತಾವರಣದ ಸಂದರ್ಭದಲ್ಲಿ ಹಾರಾಟ ನಿರ್ವಹಿಸಲು ಈ ಮಾಹಿತಿ ನೆರವಾಗುತ್ತದೆ. ಈ ಹೊಸ ವ್ಯವಸ್ಥೆಯಿಂದ ವಿಮಾನ ಹಾರಾಟ ವಿಳಂಬ ಬದಲಿಮಾರ್ಗ ಸೇರಿದಂತೆ ಪ್ರಯಾಣಿಕರಿಗೆ ಉಂಟಾಗುವ ಅನಾನುಕೂಲಗಳನ್ನು ತಡೆಗಟ್ಟಬಹುದಾಗಿದೆ ಎಂದು ತಿಳಿಸಿದರು. ಈ ನೂತನ ವ್ಯವಸ್ಥೆ, ಗಾಳಿ, ತೇವಾಂಶ, ಮಂಜು ವಿನ್ಯಾಸ ಕುರಿತಂತೆ ಮೂರು ಕಿಲೋಮೀಟರ್ ವ್ಯಾಪ್ತಿಯಲ್ಲಿ ನೈಜ ವೇಳೆ ಮಾಹಿತಿಯನ್ನು ನೀಡುತ್ತದೆ ಎಂದು ಸಚಿವ ಡಾ.ಜಿತೇಂದ್ರ ಸಿಂಗ್ ಮಾಹಿತಿ ನೀಡಿದರು.

<><><*><><<>

ಚಂಡೀಗಢದ ಮಹಾರಾಜ ಯದುವೇಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್‌ನ ಎರಡನೇ ಅರ್ಹತಾ ಪಂದ್ಯದಲ್ಲಿ ಗುಜರಾತ್ ಟೈಟನ್ಸ್ ಹಾಗೂ ರಾಜಸ್ತಾನ್ ರಾಯಲ್ಸ್ ತಂಡಗಳು ಮುಖಾಮುಖಿಯಾಗಿವೆ.  ಟಾಸ್ ಗೆದ್ದ ರಾಜಸ್ಥಾನ ರಾಯಲ್ಸ್ ಬ್ಯಾಟಿಂಗ್  ಆಯ್ಕೆ ಮಾಡಿಕೊಂಡಿದೆ. ಎರಡೂ ತಂಡಗಳಿಗೆ ಈ ಪಂದ್ಯ ನಿರ್ಣಾಯಕವೆನಿಸಿದೆ. ಗುಜರಾತ್ ಟೈಟನ್ಸ್, ಮೊದಲನೇ ಕ್ವಾಲಿಫೈಯರ್‌ನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ಸೋತು, ಈ ಪಂದ್ಯದ ಮೂಲಕ ಫೈನಲ್‌ಗೇರುವ ತವಕದಲ್ಲಿದ್ದರೆ, ಎಲಿಮಿನೇಟರ್ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ತಂಡವನ್ನು ಮಣಿಸಿ, ಗೆಲುವಿನ ಭರವಸೆಯೊಂದಿಗೆ ರಾಜಸ್ತಾನ್ ರಾಯಲ್ಸ್ ತಂಡ ಕಣಕ್ಕಿಳಿಯುತ್ತಿದೆ.  ಈ ಪಂದ್ಯದಲ್ಲಿ ಗೆಲ್ಲುವ ತಂಡ ಇದೇ ೩೧ರಂದು ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯಲಿರುವ ಫೈನಲ್‌ನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ಐಪಿಎಲ್-೨೦೨೬ ಟ್ರೋಫಿಗಾಗಿ ಸೆಣಸಾಟ ನಡೆಸಲಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>